# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 143 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 13.09.2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಇರುವ ವಿಕಲಚೇತನರ ಶಾಲೆಗಳ ವಿಶೇಷ ಶಿಕ್ಷಕರಿಗೆ ನೀಡುತ್ತಿರುವ ಸೌಲಭ್ಯಗಳು ಯಾವುವು; (ವಿವರ ಒದಗಿಸುವುದು) | ರಾಜ್ಯದಲ್ಲಿ ಇರುವ ವಿಕಲಚೇತನರ ಶಾಲೆಗಳ ವಿಶೇಷ ಶಿಕ್ಷಕರಿಗೆ ನೀಡುತ್ತಿರುವ ಸೌಲಭ್ಯಗಳು ಈ ಕೆಳಕಂಡಂತಿರುತ್ತವೆ.<br>1. ಸರ್ಕಾರಿ ವಿಶೇಷ ಶಾಲೆಗಳ ವಿಶೇಷ ಶಿಕ್ಷಕರಿಗೆ ರಾಜ್ಯ ಸರ್ಕಾರದ ನೌಕರರಿಗೆ ನೀಡುತ್ತಿರುವ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>2. 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳ ವಿಶೇಷ ಶಿಕ್ಷಕರಿಗೆ ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸಲಾದ ಆದೇಶದಂತೆ ವೇತನ ಹಾಗೂ ಭತ್ಯೆಗಳನ್ನು ಪ್ರಸ್ತುತ ಪಾವತಿಸಲಾಗುತ್ತಿದೆ.<br>3. ಅಂಗವಿಕಲ ಮಕ್ಕಳ ಕೇಂದ್ರಿಕೃತ ವಿಶೇಷ ಶೈಕ್ಷಣಿಕ ಯೋಜನೆಯಡಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿರುವ ವಿಶೇಷ ಶಾಲೆಗಳ ವಿಶೇಷ ಶಿಕ್ಷಕರಿಗೆ ಗೌರವಧನವನ್ನು ಮಾತ್ರ ಪಾವತಿಸಲಾಗುತ್ತಿದ್ದು, ವಿವರಗಳನ್ನು ಅನುಬಂಧ-01ರಲ್ಲಿ ಒದಗಿಸಲಾಗಿದೆ. |
| ಆ. | ಪ್ರಸ್ತುತ ರಾಜ್ಯದಲ್ಲಿ ಇರುವ ವಿಕಲಚೇತನರಿಗೆ ಇರುವ ವಿಶೇಷ ಶಿಕ್ಷಕರ ಅನುಪಾತಃ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) | **ಪ್ರಸ್ತುತ ಶಿಕ್ಷಕ ಮತ್ತು ಮಕ್ಕಳ ಅನುಪಾತ**<br>ಬುದ್ಧಿಮಾಂದ್ಯ ಮಕ್ಕಳಿಗೆ 1:7<br>ಶ್ರವಣದೋಷವುಳ್ಳ ಮಕ್ಕಳಿಗೆ 1:10<br>ದೃಷ್ಟಿದೋಷವುಳ್ಳ ಮಕ್ಕಳಿಗೆ 1:12 |
| ಇ. | ಶಿಶು ಕೇಂದ್ರೀಕೃತ ಶೈಕ್ಷಣಿಕ ಯೋಜನೆಯಲ್ಲಿ ವಿಶೇಷ ಶಿಕ್ಷಕರಿಗೆ ನೀಡುತ್ತಿರುವ ಗೌರವಧನ ಮತ್ತು ಇನ್ನಿತರ ಸೌಲಭ್ಯಗಳಲ್ಲಿ ತಾರತಮ್ಯ ಇರುವುದು ಹಾಗೂ ಕೇಂದ್ರ ಸರ್ಕಾರ ಘೋಷಿಸಿರುವ ಕನಿಷ್ಠ ವೇತನ ಕೂಡ ಈ ವಿಶೇಷ ಶಾಲಾ ಶಿಕ್ಷಕರಿಗೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಶಿಶು ಕೇಂದ್ರೀಕೃತ ಶೈಕ್ಷಣಿಕ ಯೋಜನೆಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿಶೇಷ ಶಿಕ್ಷಕರಿಗೆ ನೀಡುತ್ತಿರುವ ಗೌರವಧನ ಮತ್ತು ಇನ್ನಿತರ ಸೌಲಭ್ಯಗಳಲ್ಲಿ ತಾರತಮ್ಯ ಇರುವುದು ಹಾಗೂ ಕೇಂದ್ರ ಸರ್ಕಾರ ಘೋಷಿಸಿರುವ ಕನಿಷ್ಠ ವೇತನ ಕೂಡ ಈ ವಿಶೇಷ ಶಾಲಾ ಶಿಕ್ಷಕರಿಗೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಗೌರವಧನವನ್ನು ಹೆಚ್ಚಿಸುವ ಪ್ರಸ್ತಾವನೆ ಪ್ರಕ್ರಿಯೆಯಲ್ಲಿದೆ. |
| ಈ. | ವಿಕಲಚೇತನರ ಅಭಿವೃದ್ಧಿಗೆ ಶ್ರಮಿಸುತ್ತಿರುವ ವಿಶೇಷ ಶಿಕ್ಷಕರಿಗೆ ಕೇರಳ ರಾಜ್ಯದಲ್ಲಿ ನೀಡಲಾಗುತ್ತಿರುವ ಮಾದರಿಯಲ್ಲಿ ಗೌರವ ಧನ ಮತ್ತು ಇತರ ಸೌಲಭ್ಯಗಳನ್ನು ನೀಡುವ ಬಗ್ಗೆ ಸರ್ಕಾರದ ನಿಲುವೇನು? (ಮಾಹಿತಿ ನೀಡುವುದು) | ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ |

**ಸಂಖ್ಯೆ: ಮಮಇ 193 ಪಿಹೆಚ್‌ಪಿ 2022**

Halappa BA

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ
ಇಲಾಖೆ ಸಚಿವರು

# ಅನುಬಂಧ-01

## ಅಂಗವಿಕಲ ಮಕ್ಕಳ ಕೇಂದ್ರಿಕೃತ ವಿಶೇಷ ಶೈಕ್ಷಣಿಕ ಯೋಜನೆಯಡಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿರುವ ವಿಶೇಷ ಶಾಲೆಗಳ ವಿಶೇಷ ಶಿಕ್ಷಕರಿಗೆ ನೀಡಲಾಗುತ್ತಿರುವ ಗೌರವಧನ ಮಾಹಿತಿ

| ಕ್ರ.ಸಂ | ವಿವರ | ಮುಖ್ಯ ಶಿಕ್ಷಕರಿಗೆ ಮಾಸಿಕ ಗೌರವಧನ | ಸಹಾಯಕ ಶಿಕ್ಷಕರಿಗೆ ಮಾಸಿಕ ಗೌರವಧನ |
|---|---|---|---|
| 1 | ಬುದ್ಧಿಮಾಂದ್ಯ ಮಕ್ಕಳ ಶಾಲೆಗಳು | ರೂ.18,000/- | ರೂ.13,500/- |
| 2 | ದೃಷ್ಟಿದೋಷವುಳ್ಳ ಮತ್ತು ಶ್ರವಣದೋಷವುಳ್ಳ ಮಕ್ಕಳ ಪ್ರಾಥಮಿಕ ಶಾಲೆಗಳು | ರೂ.16,000/- | ರೂ.13,500/- |
| 3 | ದೃಷ್ಟಿದೋಷವುಳ್ಳ ಮತ್ತು ಶ್ರವಣದೋಷವುಳ್ಳ ಮಕ್ಕಳ ಪ್ರೌಢ ಶಾಲೆಗಳು | ರೂ.21,000/- | ರೂ.16,000/- |